## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಕಾರ್ಯದರ್ಶಿ, ವಾರ್ಡ್ ಸಮಿತಿ /ಸಹಾಯಕ ಇಂಜಿನಿಯರ್‌ರವರ ಕಛೇರಿ, ಶಂಕರಮಠ ವಾರ್ಡ್ ಸಂಖ್ಯೆ: 75,
15ನೇ ಮುಖ್ಯರಸ್ತೆ, 4ನೇ ಅಡ್ಡರಸ್ತೆ, ಕಿರ್ಲೋಸ್ಕರ್ ಕಾಲೋನಿ, 3ನೇ ಹಂತ, ಬೆಂಗಳೂರು-79.

ಸಂಖ್ಯೆ: ವಾ-75/ವಾ.ಸ./ಸಭಾನಡವಳಿ-18/2021-22 ದಿನಾಂಕ: 24/12/2021

-:ಸಭೆಯ ನಡವಳಿಗಳು:-

ಮಾನ್ಯ ನೋಡಲ್ ಅಧಿಕಾರಿಯವರ ಆದೇಶದಂತೆ, ದಿನಾಂಕ: 20/12/2021 ಸೋಮವಾರದಂದು ಬೆಳಿಗ್ಗೆ 11.00 ಘಂಟೆಗೆ ವಾರ್ಡ್-75 ಶಂಕರಮಠದ ವಾರ್ಡ್ ಮಟ್ಟದ ಸಮಿತಿ ಸಭೆಯನ್ನು ಆಯೋಜಿಸಲಾಯಿತು.

ಶ್ರೀ ಬೆನಕೇಶ್ ಆರ್. ವಾರ್ಡ್ ಸಮಿತಿಯ, ಕಾರ್ಯದರ್ಶಿಗಳು ರವರು ಸಭೆಯನ್ನು ನಡೆಸುತ್ತಾ, ಸಾರ್ವಜನಿಕರ ಕುಂದು ಕೊರತೆಗಳು ಹಾಗೂ ವಾರ್ಡ್ ಅಭಿವೃದ್ಧಿಗೆ ಸಂಭಂಧಿಸಿದಂತೆ ಹಾಗೂ ಕೋವಿಡ್-19 ವೈರಸ್‌ನ ಸೋಂಕಿನ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು, ಮೂಲಭೂತ ಸೌಕರ್ಯಗಳನ್ನು ಒದಗಿಸಲು ಹಾಗೂ ಸಾರ್ವಜನಿಕರ ಹಿತರಕ್ಷಣೆಗಾಗಿ ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಬಗ್ಗೆ ಚರ್ಚಿಸಲು ಸಭೆಯಲ್ಲಿ ಉಪಸ್ಥಿತರಾಗಿರುವ ಮಾನ್ಯ ನೋಡಲ್ ಅಧಿಕಾರಿಯವರಿಗೆ ಮತ್ತು ಸಭೆಗೆ ಆಗಮಿಸಿರುವ ಎಲ್ಲಾ ಅಧಿಕಾರಿಗಳಿಗೆ ಶ್ರೀ ಬೆನಕೇಶ್ ಆರ್. ರವರು ಸಭೆಗೆ ಸ್ವಾಗತ ಕೋರುತ್ತಾ, ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಸಭೆಯನ್ನು ಮುನ್ನಡೆಸಲಾಯಿತು.

<u>ಸಭೆಯಲ್ಲಿ ಹಾಜರಿದ್ದವರು:-</u>

| | |
|---|---|
| 1 | ಶ್ರೀ. ಎಲ್. ಸುರೇಶ್, ನೋಡಲ್ ಅಧಿಕಾರಿಗಳು ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು, ವಾರ್ಡ್-75, ಬಿಬಿಎಂಪಿ |
| 2 | ಶ್ರೀ ಬೆನಕೇಶ್ ಆರ್. ಸಮಿತಿ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು, ವಾರ್ಡ್-75, ಬಿಬಿಎಂಪಿ |
| 3 | ಶ್ರೀಮತಿ ಡಾ. ಸುನೀತಾ ಬಿ. ವೈದ್ಯಕೀಯ ಅಧಿಕಾರಿ, ವಾರ್ಡ್-75, ಬಿಬಿಎಂಪಿ. |
| 4 | ಶ್ರೀ ಎಸ್.ಲೋಕೇಶ್, ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್-75, ಬಿಬಿಎಂಪಿ. |
| 5 | ಶ್ರೀ ಕೆ.ವಿ.ಲೋಕೇಶ್, ಹಿರಿಯ ವೆಟರಿನರಿ ಪರಿವೀಕ್ಷಕರು, ವಾರ್ಡ್-75, ಬಿಬಿಎಂಪಿ. |
| 6 | ಶ್ರೀ ಸುನೀಲ್ ಕುಮಾರ್, ಕಂದಾಯ ಪರಿವಿಕ್ಷಕರು, ವಾರ್ಡ್-75, ಶಂಕರಮಠ, ಬಿಬಿಎಂಪಿ. |
| 7 | ಶ್ರೀ ಸಿದ್ದರಾಮೇಶ್ವರ್, ಕಂದಾಯ ಪರಿವಿಕ್ಷಕರು, ವಾರ್ಡ್-75, ಶಂಕರಮಠ, ಬಿಬಿಎಂಪಿ. |
| 8 | ಶ್ರೀ ಛಾಯಾಪತಿ, ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್-75. |
| 9 | ಶ್ರೀ ಚನ್ನವೀರಯ್ಯ, ಹೆಡ್ ಗ್ಯಾಂಗ್‌ಮನ್, ಕಾಮಗಾರಿ ವಿಭಾಗ, ವಾರ್ಡ್-75, ಬಿಬಿಎಂಪಿ. |
| 10 | ಶ್ರೀ ಎನ್. ಮಂಜುನಾಥ್, ಮೇಸ್ತ್ರಿ, ತೋಟಗಾರಿಕೆ ವಿಭಾಗ, ವಾರ್ಡ್-75, ಬಿಬಿಎಂಪಿ. |
| 11 | ಶ್ರೀ ರಮೇಶ್, ಮೇಸ್ತ್ರಿ, ಘ.ತ್ಯಾ.ನಿ. ವಿಭಾಗ, ವಾರ್ಡ್-75, ಬಿಬಿಎಂಪಿ. |
| 12 | ಶ್ರೀ ರಾಜೇಶ್, ವಾರ್ಡ್ ಮಾರ್ಷಲ್, ವಾರ್ಡ್-75, ಬಿಬಿಎಂಪಿ. |
| 13 | ಶ್ರೀ ದೇವರಾಜ್ ವಿ., ಬೀದಿ ದೀಪಗಳ ನಿರ್ವಹಣೆ ಗುತ್ತಿಗೆದಾರರು, ವಾರ್ಡ್-75 |
| 14 | ಶ್ರೀ ಬಿ. ಶಿವಪ್ಪ, ಕಾಮಗಾರಿ ಪರಿವೀಕ್ಷಕರು, ಎನ್.ಡಬ್ಲ್ಯು-2 ಉಪವಿಭಾಗ, ಬಿ.ಡಬ್ಲ್ಯೂ.ಎಸ್.ಎಸ್.ಬಿ. |
| 15 | ಶ್ರೀ ಪ್ರಸನ್ನ ರಾವ್, ವಾರ್ಡ್‌ನ ನಾಗರೀಕರು, ವಾರ್ಡ್-75. |
| 16 | ಶ್ರೀ ಕೆ.ವಿ.ಸುಂದರವೇಲು, ವಾರ್ಡ್‌ನ ನಾಗರೀಕರು, ವಾರ್ಡ್-75. |
| 17 | ಶ್ರೀ ಸಿದ್ದರಾಜು ಸೋಸಲೆ, ವಾರ್ಡ್‌ನ ನಾಗರೀಕರು, ವಾರ್ಡ್-75. |
| 18 | ಶ್ರೀ ಆರ್. ಮಂಜುನಾಥ್, ವಾರ್ಡ್‌ನ ನಾಗರೀಕರು, ವಾರ್ಡ್-75. |

ಮು.ತಿ.ನೋ.

Scanned by CamScanner

**<u>ಸಭೆಯಲ್ಲಿ ಚರ್ಚಿಸಲಾದ ವಿಷಯಗಳು:-</u>**

1. **ಆರೋಗ್ಯ ಇಲಾಖೆ ಮತ್ತು ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ:-**

   - ಮಾನ್ಯ ನೋಡಲ್ ಅಧಿಕಾರಿಯವರು ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ ಮಾತನಾಡುತ್ತಾ, ವಾರ್ಡ್-75 ಶಂಕರಮಠದಲ್ಲಿ ಕೋವಿಡ್-19 ಹಾಗೂ ಓಮಿಕ್ರಾನ್‌ಗೆ ಸಂಭಂಧಿಸಿದಂತೆ ಮಾಹಿತಿಗಳ ವಿವರಣೆ ನೀಡುವಂತೆ ಸಭೆಯಲ್ಲಿ ತಿಳಿಸಿದರು.
   - ಶ್ರೀಮತಿ ಡಾ. ಸುನೀತಾ ಬಿ. ವೈದ್ಯಕೀಯ ಅಧಿಕಾರಿ, ವಾರ್ಡ್-75 ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಹೊಸದಾಗಿ 4 ಓಮಿಕ್ರಾನ್ ಸೋಂಕಿತರು ಪತ್ತೆಯಾಗಿರುವುದಾಗಿ ತಿಳಿಸುತ್ತಾ, ಆರೋಗ್ಯ ಕೇಂದ್ರದಲ್ಲಿ ವ್ಯಾಕ್ಸಿನೇಷನ್ ಮತ್ತು ಸಿರಿಂಜ್‌ಗಳು ಕಡಿಮೆಯಾಗಿರುವುದಾಗಿ ಸಭೆಯಲ್ಲಿ ತಿಳಿಸಿದರು.
   - ಮಾನ್ಯ ನೋಡೆಲ್ ಅಧಿಕಾರಿ ರವರು ಮಾತನಾಡುತ್ತಾ, ದೂರವಾಣಿಯ ಮುಖಾಂತರ ಮಾತನಾಡಿ ಸಂಬಂಧಿಸಿದವರಿಂದ ಕೂಡಲೇ ಕಳುಹಿಸಲು ಸಭೆಯಲ್ಲಿ ತಿಳಿಸಿದರು.

2. **ಅಭಿಯಂತರರ ವಿಭಾಗದ ಬಗ್ಗೆ:-**

   - ಮಾನ್ಯ ನೋಡೆಲ್ ಅಧಿಕಾರಿಯವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿನ ರಸ್ತೆಗುಂಡಿಗಳನ್ನು ಸರಿಪಡಿಸುವ ಕೆಲಸವನ್ನು ಶೀಘ್ರವಾಗಿ ಕೈಗೊಳ್ಳಬೇಕಾಗಿ ಸಹಾಯಕ ಅಭಿಯಂತರರಿಗೆ ಸಭೆಯಲ್ಲಿ ಹೇಳಿದರು.
   - ಸಹಾಯಕ ಅಭಿಯಂತರರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆಗುಂಡಿಗಳನ್ನು ಸರಿಪಡಿಸುವ ಕಾಮಗಾರಿಯು ಪ್ರಗತಿಯಲ್ಲಿದ್ದು ಮುಂದಿನ ದಿನಗಳಲ್ಲಿ ಉಳಿದ ಗುಂಡಿಗಳನ್ನು ಸರಿಪಡಿಸಲಾಗುವುದು ಎಂದು ಸಭೆಯಲ್ಲಿ ತಿಳಿಸಿದರು.

3. **ವಿದ್ಯುತ್ ವಿಭಾಗದ ಬಗ್ಗೆ:-**

   - ಶ್ರೀ ಪ್ರಸನ್ನ ರಾವ್, ವಾರ್ಡ್‌ನ ನಾಗರೀಕರು ರವರು ಮಾತನಾಡುತ್ತಾ, ವಾಟರ್ ಟ್ಯಾಂಕ್ ರಸ್ತೆಯಲ್ಲಿ ಬೀದಿ ದೀಪಗಳನ್ನು ಸರಿಯಾಗಿ ಸ್ವಿಚ್ ಆಫ್ ಮಾಡುತ್ತಿಲ್ಲ ಎಂದು ಸಭೆಯಲ್ಲಿ ತಿಳಿಸಿದರು.
   - ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ಸದರಿ ರಸ್ತೆಯ ಬಿದಿ ದೀಪಗಳಿಗೆ ಅಳವಡಿಸಲಾದ ಟೈಮರ್ ಅನ್ನು ರಿಪಡಿಲು ಕ್ರಮವಹಿಉವಂತೆ ಸಭೆಯಲ್ಲಿ ಹಾಜರಿದ್ದ ಶ್ರೀ ದೇವರಾಜು, ಬೀದಿ ದೀಪಗಳ ನಿರ್ವಹಣೆ ಗುತ್ತಿಗೆದಾರರು, ರವರಿಗೆ ಸಭೆಯಲ್ಲಿ ತಿಳಿಸಿದರು.
   - ಶ್ರೀ ಸಿದ್ದರಾಜು ಸೋಸಲೆ, ವಾರ್ಡ್‌ನ ನಾಗರೀಕರು ರವರು ಮಾತನಾಡುತ್ತಾ, ಕೆಲವು ರಸ್ತೆಗಳಲ್ಲಿನ ಬೀದಿ ದೀಪಗಳು ಹಾಗೂ ಉದ್ಯಾನವನಗಳಲ್ಲಿ ಅಳವಡಿಸಲಾದ ವಿದ್ಯುತ್ ದೀಪಗಳು ರಿಯಾಗಿ ಉರಿಯುತ್ತಿರುವುದಿಲ್ಲವೆಂದು ಸಭೆಯಲ್ಲಿ ದೂರು ನೀಡಿದರು.
   - ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯ ಎಲ್ಲಾ ರಸ್ತೆಗಳ ಬೀದಿ ದೀಪಗಳ ಸರ್ವೆಯನ್ನು ನಡೆಸಿ ಹಾಗೂ ದೂರುಗಳು ಬಂದಿರುವ ವಿದ್ಯುತ್ ದೀಪಗಳನ್ನು ಸರಿಪಡಿಸಿ ಸರಿಯಾಗಿ ನಿರ್ವಹಣೆಯನ್ನು ನಿರ್ವಹಿಸುವಂತೆ ಮತ್ತು ದೂರುಗಳನ್ನು ಸರಿಪಡಿಸಿರುವ ಬಗ್ಗೆ ಮುಂದಿನ ಸಭೆಯಲ್ಲಿ ವಿವರಿಸುವಂತೆ ತಿಳಿಸಿದರು.

4. **ಪಶುಪಾಲನೆ ವಿಭಾಗದ ಬಗ್ಗೆ:-**

   - ಶ್ರೀಕೆ.ವಿ.ಸುಂದರವೇಲು, ವಾರ್ಡ್‌ನ ನಾಗರೀಕರು ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯ ಕಿರ್ಲೋಸ್ಕರ್ ಕಾಲೋನಿ 3ನೇ ಹಂತದಲ್ಲಿ ಬೀದಿ ನಾಯಿಗಳ ಕಾಟ ಹೆಚ್ಚಾಗಿರುವುದಾಗಿ ಸಭೆಯಲ್ಲಿ ತಿಳಿಸಿದರು.
   - ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಬೀದಿ ನಾಯಿಗಳು ಹೆಚ್ಚಾಗಿದ್ದು ಈ ಬಗ್ಗೆ ಸಾರ್ವಜನಿಕರಿಂದ ದೂರುಗಳು ಹೆಚ್ಚಾಗುತ್ತಿರುತ್ತದೆ, ಆದುದರಿಂದ ಬೀದಿ ನಾಯಿಗಳಿಗೆ ರೇಬಿಸ್ ವ್ಯಾಕ್ಸಿನೇಷನ್ ಅಳವಡಿಸಲು ಸೂಕ್ತ ಕ್ರಮವಹಿಸುವಂತೆ ಹಿರಿಯ ವೆಟರಿನರಿ ಪರಿವೀಕ್ಷಕರು ರವರಿಗೆ ಸಭೆಯಲ್ಲಿ ತಿಳಿಸಿದರು.

5. **ಕಂದಾಯ ವಿಭಾಗದ ಬಗ್ಗೆ:-**

   - ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ಎಂದಿನಂತೆ ವಾರ್ಡ್ ವ್ಯಾಪ್ತಿಯಲ್ಲಿ ಸಂಗ್ರಹವಾದ ಕಂದಾಯದ ಮೊತ್ತ ಹಾಗೂ ಕಂದಾಯ ಸಂಗ್ರಹಣೆಗಾಗಿ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ವರದಿ ನೀಡುವಂತೆ ಕಂದಾಯ ಪರಿವೀಕ್ಷಕರು ವಾರ್ಡ್-75 ರವರಿಗೆ ತಿಳಿಸಿದರು.

ಪು.ತಿ.ನೋ:

Scanned by CamScanner

- ಶ್ರೀ ಸುನೀಲ್ ಕುಮಾರ್, ಮತ್ತು ಶ್ರೀ ಸಿದ್ದರಾಮೇಶ್ವರ್ ಕಂದಾಯ ಪರಿವೀಕ್ಷಕರು, ವಾರ್ಡ್-75 ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಸರಿಯಾದ ರೀತಿಯಲ್ಲಿ ಕಂದಾಯ ಸಂಗ್ರಹಣೆಯಾಗುತ್ತಿದ್ದು, 01-ಏಪ್ರಿಲ್-2021 ರಿಂದ 20-ಡಿಸೆಂಬರ್-2021ರ ವರೆಗೆ ಬಾಕಿ ಹಾಗೂ ಪ್ರಸ್ತುತ ಸಾಲಿನ ಒಟ್ಟು ಮೊತ್ತ ರೂ.4.65 ಕೋಟಿಗಳಷ್ಟು ಕಂದಾಯ ಸಂಗ್ರಹವಾಗಿರುವುದಾಗಿ ತಿಳಿಸುತ್ತಾ, ಕಂದಾಯದ ವಿವರಗಳನ್ನು ಸಭೆಯಲ್ಲಿ ಸಲ್ಲಿಸಿದರು.

6. <u>ಘನತ್ಯಾಜ್ಯ ನಿರ್ವಹಣೆ ವಿಭಾಗದ ಬಗ್ಗೆ:-</u>

- ಶ್ರೀ ಕೆ.ವಿ.ಸುಂದರವೇಲು, ವಾರ್ಡ್‌ನ ನಾಗರೀಕರು ರವರು ಮಾತನಾಡುತ್ತಾ, ರಸ್ತೆ ಬದಿಯಲ್ಲಿ ತಳ್ಳುವಗಾಡಿಗಳನ್ನು ಮನೆಗಳ ಮುಂದೆ ಸುಮಾರು ಎರಡು ತಿಂಗಳಿಂದ ನಿಲ್ಲಿಸಿರುತ್ತಾರೆ ಇದರಿಂದಾಗಿ ತೊಂದರೆಯಾಗುತ್ತಿರುವುದಾಗಿ ಭೆಯಲ್ಲಿ ತಿಳಿಸಿದರು.
- ಮಾನ್ಯ ನೋಡೆಲ್ ಅಧಿಕಾರಿರವರು ಮಾತನಾಡುತ್ತಾ, ಸದರಿ ವಿಷಯವಾಗಿ ಸೂಕ್ತ ಕ್ರಮವಹಿಸಬೇಕಾಗಿ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ತಿಳಿಸುತ್ತಾ, ಗಾಡಿಗಳ ಮಾಲೀಕರು ಕಂಡುಬಂದಲ್ಲಿ ಸ್ಥಳದಲ್ಲಿ ಮಾರ್ಷಲ್‌ರವರಿಂದ ದಂಡ ವಿಧಿಸಲು ಸೂಕ್ತ ಕ್ರಮವಹಿಸಬೇಕಾಗಿ ಸಭೆಯಲ್ಲಿ ತಿಳಿಸಿದರು.
- ಶ್ರೀ ಮಂಜುನಾಥ್ ವಾರ್ಡ್‌ನ ನಾಗರೀಕರು ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯ ಕರ್ನಾಟಕ ಬಡಾವಣೆ 1ನೇ ಹಂತ 3ನೇ ಮುಖ್ಯರಸ್ತೆಯಲ್ಲಿ ಖಾಲಿ ನಿವೇಶನಗಳಲ್ಲಿ ಹೆಚ್ಚಾಗಿ ಗಿಡಗಳು ಬೆಳೆದಿದ್ದು ಇದರಿಂದಾಗಿ ಸೊಳ್ಳೆಗಳು ಉತ್ಪತ್ತಿಯಾಗುತ್ತಿದ್ದು, ಅಕ್ಕಪಕ್ಕದ ಮನೆಯವರಿಗೆ ತುಂಬಾ ತೊಂದರೆಯುಂಟಾಗಿರುವುದಾಗಿ ಸಭೆಯಲ್ಲಿ ದೂರಿದರು.

7. <u>ಅರಣ್ಯ ವಿಭಾಗದ ಬಗ್ಗೆ:-</u>

- ಶ್ರೀ ಆರ್.ಮಂಜುನಾಥ್, ವಾರ್ಡ್‌ನ ನಾಗರೀಕರು ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಅಪಾಯದ ಸ್ಥಿತಿಯಲ್ಲಿರುವ ಮರಗಳ ಕೊಂಬೆಗಳನ್ನು ಕತ್ತರಿಸಲು ಅಗತ್ಯವಾಗಿರುತ್ತದೆ ಎಂದು ಸಭೆಯಲ್ಲಿ ತಿಳಿಸಿದರು.
- ಮಾನ್ಯ ನೋಡೆಲ್ ಅಧಿಕಾರಿರವರು ದೂರವಾಣಿಯ ಮುಖಾಂತರ ಶ್ರೀ ಮಲ್ಲಪ್ಪ ಮೇಸ್ತ್ರಿ, ಅರಣ್ಯ ವಿಭಾಗ ರವರೊಂದಿಗೆ ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ 24ನೇ ಮುಖ್ಯರಸ್ತೆ, 1ನೇ ಡಿ ಅಡ್ಡರಸ್ತೆ, 11ನೇ ಮುಖ್ಯರಸ್ತೆ ಹಾಗೂ ಇತರೆ ರಸ್ತೆಗಳಲ್ಲಿ ದೂರುಗಳು ದಾಖಲಾಗಿದ್ದು, ಈಗಾಗಲೇ ಸದರಿ ಮರಗಳ ರೆಂಬೆಗಳನ್ನು ತೆರವುಗೊಳಿಸಿರುವುದಾಗಿ ಸಭೆಯಲ್ಲಿ ತಿಳಿಸಿದರು.

8. <u>ತೋಟಗಾರಿಕೆ ವಿಭಾಗದ ಬಗ್ಗೆ:-</u>

- ಶ್ರೀ ಸಿದ್ದರಾಜು ಸೋಸಲೆ, ವಾರ್ಡ್‌ನ ನಾಗರೀಕರು ರವರು ಮಾತನಾಡುತ್ತಾ, ಕೆಂಪೆಗೌಡ ಹಾಗೂ ಪೈಪ್‌ಲೈನ್ ಉದ್ಯಾನವನಗಳನ್ನು ಸರಿಯಾಗಿ ನಿರ್ವಹಣೆ ಮಾಡುತ್ತಿರುವುದಿಲ್ಲವೆಂದು ಸಭೆಯಲ್ಲಿ ದೂರಿದರು.
- ಮಾನ್ಯ ನೋಡೆಲ್ ಅಧಿಕಾರಿರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿರುವ ಎಲ್ಲಾ ಉದ್ಯಾನವನಗಳಲ್ಲಿ ಯಾವುದೇ ದೂರುಗಳು ಬಾರದಂತೆ ಸೂಕ್ತ ಕ್ರಮವಹಿಸಬೇಕಾಗಿ ಸಭೆಯಲ್ಲಿ ಹಾಜರಿದ್ದ ಶ್ರೀ ಮಂಜುನಾಥ್, ಮೇಸ್ತ್ರಿ, ತೋಟಗಾರಿಕೆ ಇಲಾಖೆ ರವರಿಗೆ ಸಭೆಯಲ್ಲಿ ತಿಳಿಸಿದರು.

9. <u>ಬೆಸ್ಕಾಂ ವಿಭಾಗದ ಬಗ್ಗೆ:-</u>

- ಮಾನ್ಯ ನೋಡೆಲ್ ಅಧಿಕಾರಿರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಬೆಸ್ಕಾಂ ಇಲಾಖೆ ವತಿಯಿಂದ ಯಾರು ಸಹ ವಾರ್ಡ್ ಸಮಿತಿ ಸಭೆಗೆ ಹಾಜರಾಗುತ್ತಿರುವುದಿಲ್ಲ ಆದುದರಿಂದ ಸಾರ್ವಜನಿಕರ ಕುಂದು-ಕೊರತೆಗಳ ಬಗ್ಗೆ ಚರ್ಚಿಸಲು ಮುಂದಿನ ಸಭೆಗಳಿಗೆ ತಪ್ಪದೇ ಭಾಗವಹಿಸುವಂತೆ ತಿಳಿಸಿ ಬೆಸ್ಕಾಂ ರವರಿಗೆ ಸಮಿತಿಯ ವತಿಯಿಂದ ಪತ್ರ ಬರೆಯುವಂತೆ ಕಾರ್ಯದರ್ಶಿಗಳಿಗೆ ಸಭೆಯಲ್ಲಿ ತಿಳಿಸಿದರು.

10. <u>ಪೊಲೀಸ್ ವಿಭಾಗದ ಬಗ್ಗೆ:-</u>

- ಮಾನ್ಯ ನೋಡೆಲ್ ಅಧಿಕಾರಿರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಪೊಲೀಸ್ ಇಲಾಖೆ ವತಿಯಿಂದ ಯಾರು ಸಹ ವಾರ್ಡ್ ಸಮಿತಿ ಸಭೆಗೆ ಹಾಜರಾಗುತ್ತಿರುವುದಿಲ್ಲ ಆದುದರಿಂದ ಸಾರ್ವಜನಿಕರ ಕುಂದು-ಕೊರತೆಗಳ ಬಗ್ಗೆ ಚರ್ಚಿಸಲು ಮುಂದಿನ ಸಭೆಗಳಿಗೆ ತಪ್ಪದೇ ಭಾಗವಹಿಸುವಂತೆ ತಿಳಿಸಿ ಪೊಲೀಸ್ ರವರಿಗೆ ಸಮಿತಿಯ ವತಿಯಿಂದ ಪತ್ರ ಬರೆಯುವಂತೆ ಕಾರ್ಯದರ್ಶಿಗಳಿಗೆ ಸಭೆಯಲ್ಲಿ ತಿಳಿಸಿದರು.

ಮು.ತಿ.ನೋ.

Scanned by CamScanner

ಮುಂದುವರೆದು, ಪ್ರತೀ ಸಭೆಯ ಸಭಾ ನಡವಳಿಗಳನ್ನು ವಾರ್ಡ್‌ಗೆ ಸಂಬಂಧಿಸಿದ ಎಲ್ಲಾ ಇಲಾಖೆಗಳಿಗೆ ತಲುಪುವಂತೆ ಮಾಡಲು ಕಾರ್ಯದರ್ಶಿ ರವರಿಗೆ ಸೂಚಿಸಿದರು. ವಾರ್ಡ್‌ಗೆ ಸಂಬಂಧಿಸಿದ ಎಲ್ಲಾ ಇಲಾಖೆಗಳ ಅಧಿಕಾರಿಗಳು ಸಭಾ ನಡವಳಿಗಳಿಗೆ ಅನುಸಾರವಾಗಿ ತಮ್ಮ ಇಲಾಖೆಗೆ ಸಂಬಂಧಿಸಿದ ದೂರುಗಳನ್ನು ಪಟ್ಟಿ ಮಾಡಿಕೊಂಡು, ಸದರಿ ದೂರುಗಳನ್ನು ಸರಿಪಡಿಸಿರುವ ಬಗ್ಗೆ ಅಥವಾ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ಟಿಪ್ಪಣಿಯೊಂದಿಗೆ ದಾಖಲಾತಿಗಳನ್ನು ದೃಢೀಕರಿಸಿ ಕಡತದಲ್ಲಿ ತಪ್ಪದೇ **ಪ್ರತೀ ವಾರ್ಡ್ ಸಮಿತಿ ಸಭೆಯಲ್ಲಿ** ವರದಿ ಮಾಡಲು ಹಾಗೂ **ವಾರ್ಡ್ ಕಮಿಟಿ ವಾರ್ಡ್-75 ವಾಟ್ಸ್ ಆಪ್ ಗ್ರೂಪ್** ನಲ್ಲಿ ವರದಿ ಮಾಡಲು ಸೂಚಿಸುತ್ತಾ, ಸಭೆಯನ್ನು ಮುಕ್ತಾಯ ಗೊಳಿಸಲಾಯಿತು. ಕೊನೆಯಲ್ಲಿ ಕಾರ್ಯದರ್ಶಿಗಳು ಸಭೆಗೆ ಆಗಮಿಸಿರುವ ಎಲ್ಲರಿಗೂ ವಂದಿಸಿದರು.

ನೋಡಲ್ ಅಧಿಕಾರಿರವರ ಅನುಮೋದನೆ ಮೇರೆಗೆ )

24/12/2021.

ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ: 75

ಪ್ರತಿಯನ್ನು :-

1. ಮಾನ್ಯ ವಲಯ ವಿಶೇಷ ಆಯುಕ್ತರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
3. ಮಾನ್ಯ ಮುಖ್ಯ ಅಭಿಯಂತರರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ. ಸಹಾಯಕರಿಗೆ ಸಲ್ಲಿಸಿದೆ. ತರಲು ಮತ್ತು ಅಗತ್ಯ ಕ್ರಮಕ್ಕಾಗಿ ತಾಂತ್ರಿಕ
4. ಮಾನ್ಯ ಆರೋಗ್ಯ ಅಧಿಕಾರಿಗಳು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
5. ಮಾನ್ಯ ಅಧೀಕ್ಷಕ ಅಭಿಯಂತರರು, (ಘನತ್ಯಾಜ್ಯ ನಿರ್ವಹಣೆ) ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಆಪ್ತ ಸಹಾಯಕರವರಿಗೆ ಸಲ್ಲಿಸಿದೆ.
6. ಮಾನ್ಯ ಅರಣ್ಯಾಧಿಕಾರಿಗಳು, ಅರಣ್ಯ ವಿಭಾಗ ರವರಿಗೆ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಆಪ್ತ ಸಹಾಯಕರವರಿಗೆ ಸಲ್ಲಿಸಿದೆ.
7. ಮಾನ್ಯ ಅಧೀಕ್ಷಕರು, ತೋಟಗಾರಿಕೆ ಇಲಾಖೆ ರವರ ಅವಗಾಹನೆಗೆ ತರಲು ಹಾಗೂ ಅಗತ್ಯ ಕ್ರಮಕ್ಕಾಗಿ ಸಹಾಯಕರಿಗೆ ಸಲ್ಲಿಸಿದೆ.
8. ವೈದ್ಯಕೀಯ ಆರೋಗ್ಯ ಅಧಿಕಾರಿಗಳು, (ಪಶ್ಚಿಮ ವಲಯ) ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
9. ಕಾರ್ಯಪಾಲಕ ಅಭಿಯಂತರರು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
10. ಕಂದಾಯ ಅಧಿಕಾರಿಗಳು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
11. ಸಹಾಯಕ ಕಾರ್ಯಪಾಲಕ ಅಭಿಯಂತರರು ನಾಗಪುರ ಉಪವಿಭಾಗ ರವರಿಗೆ ಸೂಕ್ತ ಕ್ರಮವಹಿಸಲು ಸಲ್ಲಿಸಿದೆ.
12. ಸಹಾಯಕ ಕಂದಾಯ ಅಧಿಕಾರಿಗಳು ನಾಗಪುರ ಉಪವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
13. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪರಿಸರ ವಿಭಾಗ) ನಾಗಪುರ ಉಪವಿಭಾಗ ರವರ ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
14. ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯುತ್ ವಿಭಾಗ ರವರಿಗೆ ಸೂಕ್ತ ಕ್ರಮ ವಹಿಸಲು ಸಲ್ಲಿಸಿದೆ.
15. ಎಲ್ಲಾ ಸಂಬಂಧಪಟ್ಟವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
16. ಕಛೇರಿಯ ಕಡತಕ್ಕೆ.

Scanned by CamScanner